ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ವಿಶ್ವವಿದ್ಯಾಲಯಗಳಲ್ಲಿ ನಡೆದಿರುವ ಅಕ್ರಮಗಳು

ಶ್ರೀರಘುನಾಥ್‌ರಾವ್‌ಮಲ್ಕಾಪೂರೆ(ವಿಧಾನ ಸಭೆಯಿಂದಚುನಾಯಿತರಾದವರು):-

57 (96) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಯಾವ ಯಾವ ವಿಶ್ವವಿದ್ಯಾಲಯಗಳಲ್ಲಿ ಅಕ್ರಮ ನೇಮಕಾತಿ ಪ್ರಕರಣಗಳು, ಭ್ರಷ್ಟಾಚಾರದ ಪ್ರಕರಣಗಳು ಮತ್ತು ನಕಲಿ ಅಂಕಪಟ್ಟಿ ಪ್ರಕರಣಗಳು ಪತ್ತೆಯಾಗಿವೆ ;

(ಆ) ಈ ಪ್ರಕರಣಗಳಲ್ಲಿ ಭಾಗಿಯಾಗಿರುವವರ ವಿವರ ನೀಡುವುದು ; (ವಿಶ್ವವಿದ್ಯಾಲಯವಾರು ಮಾಹಿತಿ ನೀಡುವುದು)

(ಇ) ಪ್ರಕರಣಗಳಲ್ಲಿ ಭಾಗಿಯಾದವರ ವಿರುದ್ಧ ಸಂಬಂಧಪಟ್ಟ ವಿಶ್ವವಿದ್ಯಾಲಯಗಳು ಯಾವ ಯಾವ ಶಿಸ್ತಿನ ಕ್ರಮಗಳನ್ನು ಕೈಗೊಂಡಿವೆ ; ಯಾರ ಮೇಲೆ ಮೊಕದ್ದಮೆಗಳನ್ನು ದಾಖಲಿಸಲಾಗಿದೆ;

(ಈ) ರಾಜ್ಯದ ವಿಶ್ವವಿದ್ಯಾಲಯಗಳನ್ನು ಭ್ರಷ್ಟಾಚಾರ ಮುಕ್ತ ಮತ್ತು ಪಾರದರ್ಶಕ ಆಡಳಿತ ನಡೆಸುವಂತೆ ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?